ದಿನಾಂಕ 18-12-2023 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಪಾಟೀ ಸವಾಲುಃ** ಆರೋಪಿ ಪರ ಶ್ರೀ ಎ ಟಿ ವಕೀಲರಿಂದ,

1) ನಾನು ನ್ಯಾಯಾಲಯಕ್ಕೆ ಸುಭಾಷ್ ಚಂದ್ರ ಜೈನ್ ಮತ್ತು ಮಂಜೇಗೌಡರವರ ಜೊತೆ ಬರುತ್ತೇನೆ ಎಂದರೆ ಸರಿಯಲ್ಲ. ನಾನು ಈ ದಿನವೂ ಸಹ ಸುಭಾಷ್ ಚಂದ್ರ ಜೈನ್ ಜೊತೆ ಬಂದಿರುತ್ತೇನೆ ಎಂದರೆ ಸರಿಯಲ್ಲ. ಸುಭಾಷ್ ಚಂದ್ರ ಜೈನ್ ಮತ್ತು ಮಂಜೇಗೌಡರವರು ಆರೋಪಿ ವಿರುದ್ಧ ಸಿಸಿ 180/17 ಮತ್ತು 181/17 ಪ್ರಕರಣಗಳನ್ನು ದಾಖಲು ಮಾಡಿರುತ್ತೇನೆ ಎಂದರೆ ನನಗೆ ಗೊತ್ತಿಲ್ಲ. ಸದರಿ ಪ್ರಕರಣಗಳು ವಜಾ ಆಗಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ಆರೋಪಿ ನನಗೆ ಪ್ರತ್ಯುತ್ತರ ನೀಡಿರುತ್ತಾರೆ ಎಂದರೆ ಸರಿ. ಸಾಕ್ಷಿಗೆ ತಾನು ಸಲ್ಲಿಸಿರುವ ವಕಾಲತ್ ನಾಮೆಯಲ್ಲಿ ತನ್ನ ಸಹಿಯನ್ನು ನೋಡಿ ಸಹಿಯನ್ನು ನಾನು ಮಾಡಿರುವುದಿಲ್ಲ ಎಂದು ನುಡಿಯುತ್ತಾರೆ. ಆರೋಪಿ ಪ್ರತ್ಯುತ್ತರ ನೀಡಿದ ನಂತರ ನಮ್ಮ ಮನೆಯಲ್ಲಿ ಪಂಚಾಯ್ತಿ ಆಗಿರುತ್ತದೆ ಎಂದರೆ ಸರಿಯಲ್ಲ.

2) ದಿಃ 25-05-2019 ರಂದು ನಮ್ಮ ಮನೆಯಲ್ಲಿ ಪಂಚಾಯ್ತಿ ಆಗಿ ನಾನು ಆರೋಪಿ ಗೆ ಕರಾರು ಪತ್ರ ಬರೆದುಕೊಟ್ಟಿದ್ದೇನೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಸದರಿ ಚೆಕ್ಕಿನ ಬಾಬ್ತು ಪ್ರಕರಣ ದಾಖಲು ಮಾಡುವುದಿಲ್ಲ ಎಂದು ನಮೂದು ಮಾಡಿರುತ್ತೇವೆ ಎಂದರೆ ಸರಿಯಲ್ಲ. ಚೆಕ್ಕೂ ಸಹ ವಕೀಲರ ಬಳಿ ಇದ್ದು ಅದನ್ನು ವಾಪಸ್ಸು ಕೊಡುತ್ತೇವೆ ಎಂದು ನಮೂದು ಮಾಡಿರುತ್ತೇವೆ ಎಂದರೆ ಸರಿಯಲ್ಲ. ನನ್ನ ಮತ್ತು ಆರೋಪಿ ನಡುವೆ ಯಾವುದೇ ಹಣಕಾಸಿನ ವ್ಯವಹಾರ ಆಗಿರುವುದಿಲ್ಲ ಎಂದರೆ ಸರಿಯಲ್ಲ. ಸುಭಾಷ್ ಚಂದ್ರ ಜೈನ್ ಮತ್ತು ಮಂಜೇಗೌಡರವರ ಬಳಿ ಆರೋಪಿ ಚೆಕ್ಕನ್ನು ಪಡೆದುಕೊಂಡು ಈ ಪ್ರಕರಣ ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ.ಕೇ.ಸ.ಇ.ಒ.,

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಕೆ.ಆರ್.ನಗರ.